ವಯೋಮಿತಿ ಮೀರಿ ಸಂದರ್ಶನಕ್ಕೆ ಹಾಜರಾದ ಶುಶ್ರೂಷಕಿ ನೇಮಕಾತಿ ಬಗ್ಗೆ

2216 - ಶ್ರೀ ಯು.ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಆರೋಗ್ಯ ಇಲಾಖೆಯಲ್ಲಿ ಶುಶ್ರೂಷಕಿ ಹುದ್ದೆಗೆ ಫೆಬ್ರವರಿ1996ರಲ್ಲಿ ನಡೆದ ಸಂದರ್ಶನಕ್ಕೆ ಹಾಜರಾದ ಅಭ್ಯರ್ಥಿಗಳಲ್ಲಿ ವಯೋಮಿತಿ ಮೀರಿರುವವರನ್ನು (ಶುಶ್ರೂಷಕಿ) ಈ ಹುದ್ದೆಗೆ ನೇಮಕ ಮಾಡುವ ಬಗ್ಗೆ ಕರ್ನಾಟಕ ಆಡಳಿತ ನ್ಯಾಯಮಂಡಳಿಯವರು ದಿನಾಂಕ : 7-1-1997 ರಂದು ನೀಡಿರುವ ಆದೇಶದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು)*

ಆ) *(ಇವರುಗಳಿಗೆ) ಈ ನೇಮಕಾತಿಗೆ ಆದೇಶ ಯಾವಾಗ ನೀಡಲಾಗುವುದು?*

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಕರ್ನಾಟಕ ಆಡಳಿತ ನ್ಯಾಯಮಂಡಳಿಯು ನೀಡಿದ ತೀರ್ಪಿನ ಮೇರೆಗೆ ವಯೋಮಿತಿ ಮೀರಿದ ಶುಶ್ರೂಷಕಿಯರನ್ನು ನೇಮಕಾತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿದ ಕೂಡಲೆ ಕ್ರಮ ಕೈಗೊಳ್ಳಲಾಗುವುದು.

1997-98ನೇ ಸಾಲಿನಲ್ಲಿ ಮಂಜೂರಾಗಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು

2217- ಶ್ರೀ ಬಿ. ಶಿವರಾಮು (ಗಂಡಸೀ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1997-98ನೇ ಸಾಲಿಗೆ ಸರ್ಕಾರ ಮಂಜೂರಾತಿ ಮಾಡಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಾಮೂಹಿಕ ಆರೋಗ್ಯ ಕೇಂದ್ರಗಳೆಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)*

ಆ) *ಕೇಂದ್ರ ಸರ್ಕಾರದಿಂದ ಪ್ರತಿ ವರುಷ 1994-95, 95-96, 96-97, ಮತ್ತು 97-98ನೇ ಸಾಲಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿಗೆ ಕೊಡುವ ಅನುದಾನ ಅನುಮತಿ ಎಷ್ಟು?*

ಇ) *ಕೇಂದ್ರದ ನೆರವನ್ನು ಮಂಜೂರಾತಿಯನ್ನು ರಾಜ್ಯ ಸರ್ಕಾರ ಮಾಡಿದರೆ ರಾಜ್ಯ ಸರ್ಕಾರ ಅನುದಾನವನ್ನು ಭರಿಸುತ್ತದೆಯೇ?*

ಈ) *1998-99ನೇ ಕೇಂದ್ರದ ನೆರವನ್ನು ನಿರೀಕ್ಷಿಸಿ 97-98ನೇ ಸಾಲಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ರಾಜ್ಯ ಸರ್ಕಾರ ಮಂಜೂರಾತಿ ಮಾಡಬಹುದೇ?*

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 1997-98ನೇ ಸಾಲಿಗೆ ಸರ್ಕಾರ ಇನ್ನೂ ಯಾವುದೇ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮೂದಾಯ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡಿರುವುದಿಲ್ಲ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಂಜೂರಾತಿಗಾಗಿ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗುವುದಿಲ್ಲ.

ಇ) ಅವಶ್ಯಕವಾದ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸುತ್ತಿದೆ.

ಈ) ಉದ್ಭವಿಸುವುದಿಲ್ಲ.

ಶಿಕ್ಷಕರುಗಳಿಗೆ ಪೋಲಿಯೋ ತರಬೇತಿ.

2220 - ಶ್ರೀ ಜಿ.ಎಸ್. ಶಿವನಂಜಪ್ಪ (ಗುಬ್ಬಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪೋಲಿಯೋ ಕಾರ್ಯಕ್ರಮಕ್ಕಾಗಿ ಯಾವ ಯಾವ ತಾಲ್ಲೂಕುಗಳಲ್ಲಿ ಶಿಕ್ಷಕರುಗಳಿಗೆ ತರಬೇತಿ ಕೊಡಲಾಗಿದೆ?

ಆ) ಎಷ್ಟು ಜನ ಶಿಕ್ಷಕರುಗಳಿಗೆ ತರಬೇತಿ ಕೊಡಲಾಗಿದೆ? (ತಾಲ್ಲೂಕುವಾರು ಪಟ್ಟಿ ಒದಗಿಸುವುದು).

ಇ) ಇದಕ್ಕೆ ಖರ್ಚಾಗಿರುವ ಹಣ ಎಷ್ಟು?

ಈ) ಇದಕ್ಕೆ ಉಪಯೋಗಿಸಲಾದ ವಾಹನಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ಕೊಡುವುದು).

ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಶಿಕ್ಷಕರುಗಳ ತರಬೇತಿಗೆ ಹಣ ಖರ್ಚಾಗಿರುವುದಿಲ್ಲ. ಆದರೆ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ 1995-96 ಮತ್ತು 1996-97 ನೇ ಸಾಲಿನಲ್ಲಿ ಒಟ್ಟು ರೂ.: 262.80 ಲಕ್ಷ ಹಣ ಖರ್ಚು ಮಾಡಲಾಗಿದೆ.

ಈ) 1995-96 ನೇ ಸಾಲಿನಲ್ಲಿ ಮತ್ತು 1996-97ನೇ ಸಾಲಿನಲ್ಲಿ ಪ್ರತಿ ಸುತ್ತಿಗೂ ಪ್ರತಿ ತಾಲ್ಲೂಕಿನಲ್ಲಿ ಸರಾಸರಿ 8 ವಾಹನಗಳನ್ನು ಉಪಯೋಗಿಸಲಾಗಿದೆ.